# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಹಾಯಕ ಕಾರ್ಯನಿರ್ವಾಹಕ ಅಭಿಯಂತರರ ಕಛೇರಿ,
ಬಿ.ಟಿ.ಎಂ.ಲೇಔಟ್ ಉಪ ವಿಭಾಗ,
16ನೇ ಮುಖ್ಯರಸ್ತೆ, ಬಿ.ಟಿ.ಎಂ.1ನೇ ಹಂತ,
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ,
ಬೆಂಗಳೂರು-29, ದಿನಾಂಕ: 19.01.2023

## ವಾರ್ಡ್ ಸಮಿತಿ ಸಭೆಯ ಸೂಚನಾ ಪತ್ರ

**ವಿಷಯ:-** ವಾರ್ಡ್ ಸಮಿತಿ ಸಭೆಯನ್ನು ನಡೆಸುವ ಬಗ್ಗೆ

**ಉಲ್ಲೇಖ:**1) ಘನ ಉಚ್ಚ ನ್ಯಾಯಾಲಯದ ಆದೇಶ ಸಂಖ್ಯೆ: ಡಬ್ಲ್ಯೂಪಿ 24739/2012, ದಿನಾಂಕ: 10.11.2017

2) ವಲಯ ಆಯುಕ್ತರು (ದ) ರವರ ಆದೇಶ ಸಂಖ್ಯೆ:ವ.ಆ(ದ)/ಪಿ.ಆರ್/458/2022-23, ದಿನಾಂಕ: 13.09.2022

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಉಲ್ಲೇಖಿತ ಆದೇಶಗಳಂತೆ ಪ್ರತಿ ಮಾಹೆಯ 1ನೇ ಮತ್ತು 3ನೇ ಶನಿವಾರ ವಾರ್ಡ್ ಸಮಿತಿ ಸಭೆಯನ್ನು ಆಯೋಜಿಸಬೇಕಾಗಿದ್ದು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ದಕ್ಷಿಣವಲಯದ ವಾರ್ಡ್ ಸಂಖ್ಯೆ:192 ಬಿ.ಟಿ.ಎಂ ಲೇಔಟ್, 9ನೇ ಮುಖ್ಯರಸ್ತೆಯ ಬಿ.ಟಿ.ಎಂ 2ನೇ ಹಂತದ ಕೆಂಪೇಗೌಡ ಆಟದ ಮೈದಾನದಲ್ಲಿರುವ ಬಿ.ಬಿ.ಎಂ.ಪಿ ಕಛೇರಿಯಲ್ಲಿ ಸಭೆಯನ್ನು ದಿನಾಂಕ: 21.01.2023ರ ಬೆಳಿಗ್ಗೆ 11:00 ಗಂಟೆಗೆ ನಿಗಧಿಪಡಿಸಲಾಗಿದ್ದು, ವಾರ್ಡ್ ಸಮಿತಿ ಸದಸ್ಯರು ಹಾಗೂ ವಾರ್ಡ್ ಸಂಖ್ಯೆ 192 ಬಿ.ಟಿ.ಎಂ ಲೇಔಟ್‌ಗೆ ಸಂಬಂಧಿಸಿದ ಅಧಿಕಾರಿಗಳು ಸಭೆಗೆ ತಪ್ಪದೇ ಹಾಜರಾಗಲು ಈ ಮೂಲಕ ಕೋರುತ್ತೇನೆ.

**:ಸಭಾ ಅಜೆಂಡಾ:**

| | |
|---|---|
| 1) | ಹಿಂದಿನ ಸಭೆಯ ನಡುವಳಿಗಳನ್ನು ಓದಿ ರೆಕಾರ್ಡ್ ಮಾಡುವುದು |
| 2) | ಕೋವಿಡ್-19 ರ ಬಗ್ಗೆ ಚರ್ಚಿಸುವುದು |
| 3) | ವಾರ್ಡ್ ವ್ಯಾಪ್ತಿಯಲ್ಲಿನ ಘನತ್ಯಾಜ್ಯ ನಿರ್ವಹಣೆ ಬಗ್ಗೆ ಚರ್ಚಿಸುವ ವಿಚಾರ |
| 4) | ವಾರ್ಡ್ ವ್ಯಾಪ್ತಿಯಲ್ಲಿನ ಕಾಮಗಾರಿಗಳು ಮತ್ತು ರಸ್ತೆ ಗುಂಡಿಗಳ ದುರಸ್ಥಿಪಡಿಸುವ ಬಗ್ಗೆ |
| 5) | ಮಾನ್ಯ ಅಧ್ಯಕ್ಷರ ಅಪ್ಪಣೆಯ ಮೇರೆಗೆ ಚರ್ಚಿಸಬಹುದಾದ ಇತರೆ ವಿಷಯಗಳ ಬಗ್ಗೆ ಚರ್ಚೆ |

19/1/2023
ಕಾರ್ಯದರ್ಶಿಗಳು,
ವಾರ್ಡ್ ಸಂಖ್ಯೆ:192, ಬಿ.ಟಿ.ಎಂ ಲೇಔಟ್
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ರವರಿಗೆ :-**

1) ಸಹಾಯಕ ಕಾರ್ಯಪಾಲಕ ಅಭಿಯಂತರರು(ಬಿಟಿಎಂ)ವಿಭಾಗ ರವರ ಮಾಹಿತಿಗಾಗಿ ಸಲ್ಲಿಸಿದೆ.
2) ಸಹಾಯಕ ಕಾರ್ಯಪಾಲಕ ಅಭಿಯಂತರರು(ಘ.ತ್ಯಾ.ನಿ.ಅ.ಬಿಟಿಎಂ)ವಿಭಾಗ ರವರ ಮಾಹಿತಿಗಾಗಿ ಹಾಗೂ ಸದರಿ ಸಭೆಗೆ ಹಾಜರಾಗಲು ಕೋರಲಾಗಿದೆ.
3) ಸಹಾಯಕ ಕಾರ್ಯಪಾಲಕ ಅಭಿಯಂತರರು ಬೆಸ್ಕಾಂ ಉಪ ವಿಭಾಗ ಎಸ್-16 ರವರ ಮಾಹಿತಿಗಾಗಿ ಹಾಗೂ ಸದರಿ ಸಭೆಗೆ ಹಾಜರಾಗಲು ಕೋರಲಾಗಿದೆ.
4) ಸಹಾಯಕ ಕಾರ್ಯಪಾಲಕ ಅಭಿಯಂತರರು ಉಪ ವಿಭಾಗ ಎಸ್-6 ಬೆಂಗಳೂರು ನೀರುಸರಬರಾಜು ಮಂಡಳಿ ರವರ ಮಾಹಿತಿಗಾಗಿ ಹಾಗೂ ಸದರಿ ಸಭೆಗೆ ಹಾಜರಾಗಲು ಕೋರಲಾಗಿದೆ.
5) ತೋಟಗಾರಿಕೆ ಅಧೀಕ್ಷಕರು (ದಕ್ಷಿಣ) ರವರ ಮಾಹಿತಿಗಾಗಿ ಹಾಗೂ ಸದರಿ ಸಭೆಗೆ ಹಾಜರಾಗಲು ಕೋರಲಾಗಿದೆ.
6) ಆರೋಗ್ಯ ವೈದ್ಯಾಧಿಕಾರಿಗಳು ಬಿ.ಟಿ.ಎಂ ಲೇಔಟ್ ವಿಭಾಗದವರ ಮಾಹಿತಿಗಾಗಿ ಹಾಗೂ ಸದರಿ ಸಭೆಗೆ ಹಾಜರಾಗಲು ಕೋರಲಾಗಿದೆ.
7) ಸಹಾಯಕ ಕಂದಾಯ ಅಧಿಕಾರಿಗಳು ಬಿ.ಟಿ.ಎಂ ಉಪ ವಿಭಾಗ ರವರ ಮಾಹಿತಿಗಾಗಿ ಹಾಗೂ ಸದರಿ ಸಭೆಗೆ ಹಾಜರಾಗಲು ಕೋರಲಾಗಿದೆ.
8) ಸಹಾಯಕ ಕಾರ್ಯಪಾಲಕ ಅಭಿಯಂತರರು ವಿದ್ಯುತ್ ಉಪವಿಭಾಗ ದಕ್ಷಿಣ ವಲಯ ರವರ ಮಾಹಿತಿಗಾಗಿ ಹಾಗೂ ಸದರಿ ಸಭೆಗೆ ಹಾಜರಾಗಲು ಕೋರಲಾಗಿದೆ.
9) ಆರಕ್ಷಕ ಉಪನಿರೀಕ್ಷಕರು ಮೈಕೋ ಲೇಔಟ್ ಪೊಲೀಸ್ ಠಾಣೆ ರವರ ಮಾಹಿತಿಗಾಗಿ ಹಾಗೂ ಸದರಿ ಸಭೆಗೆ ಹಾಜರಾಗಲು ಕೋರಲಾಗಿದೆ.
10) ಆರಕ್ಷಕ ಉಪನಿರೀಕ್ಷಕರು ಸಂಚಾರಿ ಪೊಲೀಸ್ ಠಾಣೆ ಮೈಕೋ ಲೇಔಟ್ ರವರ ಮಾಹಿತಿಗಾಗಿ ಹಾಗೂ ಸದರಿ ಸಭೆಗೆ ಹಾಜರಾಗಲು ಕೋರಲಾಗಿದೆ.
11) ಮಾನ್ಯ ಮುಖ್ಯ ಅಭಿಯಂತರರು ಬೆಂಗಳೂರು ಮೆಟ್ರೋ ರೈಲು ನಿಗಮ ರವರ ಮಾಹಿತಿಗಾಗಿ ಹಾಗೂ ಸದರಿ ಸಭೆಗೆ ಹಾಜರಾಗಲು ಕೋರಲಾಗಿದೆ.

Scanned with OKEN Scanner

# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

## ಬಿ.ಟಿ.ಎಂ ಲೇಔಟ್ ಉಪ-ವಿಭಾಗದ ವಾರ್ಡ್ ಸಂಖ್ಯೆ-192 ಬಿ.ಟಿ.ಎಂ ಬಡಾವಣೆ ಕಛೇರಿಯಲ್ಲಿ ದಿನಾಂಕ: 21.01.2023 ರಂದು ನಡೆದ ವಾರ್ಡ್ ಸಮಿತಿ ಸಭೆಯ ನಡವಳಿಗಳು.

ಬಿ.ಬಿ.ಎಂ.ಪಿ ವ್ಯಾಪ್ತಿಯಲ್ಲಿ ಸಾರ್ವಜನಿಕರಿಗೆ ಪರಿಣಾಮಕಾರಿಯಾಗಿ ಸೇವೆಗಳನ್ನು ಒದಗಿಸುವ ನಿಟ್ಟಿನಲ್ಲಿ ಪಾಲಿಕೆಯ ವಾರ್ಡ್ ಹಂತದಲ್ಲಿ ಸಮಿತಿಗಳನ್ನು ರಚಿಸುವ ಸಲುವಾಗಿ ಮಾನ್ಯ ವಲಯ ಆಯುಕ್ತರು, ಬಿ.ಬಿ.ಬಿ.ಎಂ.,ರವರ ಕಛೇರಿ ಆದೇಶದ ಸಂಖ್ಯೆ:ವ.ಆ(ದ)/ಪಿಆರ್/458/2022-23, ದಿನಾಂಕ:13-07-2022ರ ಆದೇಶದಂತೆ ನೋಡೆಲ್ ಅಧಿಕಾರಿಯನ್ನಾಗಿ ಶ್ರೀ.ಸಂತೋಷ್, ಸ.ಕಾನಿ.ಅ ಘನತ್ಯಾಜ್ಯ ಬಿ.ಬಿ.ಎಂಪಿ.ರವನ್ನು ನೇಮಿಸಲಾಗಿ, ಇವರನ್ನು ವಾರ್ಡ್ ಮಟ್ಟದಲ್ಲಿ ಸಾರ್ವಜನಿಕರಿಗೆ ಪ್ರಮುಖವಾದ ಮೂಲಭೂತ ಸೌಕರ್ಯಗಳಾದ ಘನತ್ಯಾಜ್ಯ ವಸ್ತುಗಳ ನಿರ್ವಹಣೆ, ಸಾರ್ವಜನಿಕ ಆರೋಗ್ಯ, ಶಿಕ್ಷಣ, ನಗರದ ಸ್ವಚ್ಛತೆ, ರಸ್ತೆ ನಿರ್ವಹಣೆ/ನಿರ್ಮಾಣ, ಬೀದಿ ದೀಪಗಳ ನಿರ್ವಹಣೆ, ನೀರು ಸರಬರಾಜು ಮತ್ತು ಒಳಚರಂಡಿ ಮತ್ತು ಇನ್ನಿತರ ಕಲ್ಯಾಣ ಕಾರ್ಯಕ್ರಮಗಳಂತಹ ಹಲವಾರು ಸೌಲಭ್ಯಗಳನ್ನು ಪರಿಣಾಕಾರಿಯಾಗಿ ಒದಗಿಸುವ ನಿಟ್ಟಿನಲ್ಲಿ ಮತ್ತು ಪಾಲಿಕೆಯ ಹಾಗೂ ಸಾರ್ವಜನಿಕರ ನಡುವೆ ಸಮನ್ವಯ ಸಾಧಿಸುವ ನಿಟ್ಟಿನಲ್ಲಿ ಪಾಲಿಕೆಯ ವಾರ್ಡ್ ಹಂತದಲ್ಲಿ ಸಮಿತಿ ಸಭೆಗೆ ಈ ಕೆಳಕಂಡ ಅಧಿಕಾರಿ ವರ್ಗ/ ಸದಸ್ಯರು ಮತ್ತು ಸ್ಥಳೀಯ ನಾಗರೀಕರು ಹಾಜರಾಗಿದ್ದರು.

**ಸಭೆಗೆ ಹಾಜರಿದ್ದ ಅಧಿಕಾರಿ/ಸದಸ್ಯರುಗಳ ವಿವರ**

| ಕ್ರಸಂ. | ಹೆಸರು | ಮೊಬೈಲ್ ಸಂಖ್ಯೆ |
|---|---|---|
| 1 | ಶ್ರೀಸಂತೋಷ್.ಸ.ಕಾ.ನಿ.ಅ ಘನತ್ಯಾಜ್ಯ ಬಿ.ಟಿ.ಎಂ ವಿಭಾಗ | 9480683475 |
| 2 | ಶ್ರೀ.ನರೇಶ್‌ಕುಮಾರ್.ಕೆ ಸ.ಇಂ-192 ವಾರ್ಡ್ | 9844407499 |
| 3 | ಶ್ರೀ.ಮಲ್ಲಿಕಾರ್ಜುನ್ ಹಿರಿಯ ಆರೋಗ್ಯ ಪರಿವೀಕ್ಷಕರು | 9740660072 |
| 4 | ಶ್ರೀ. ಪ್ರಹ್ಲಾದ್,ಕಿರಿಯ ಆರೋಗ್ಯಾ ಪರಿವೀಕ್ಷಕರು | 9972320005 |
| 5 | ಶ್ರಿ. ಮುನಿರಾಜು ಸ್ಯಾನಟರಿ ದಫೇದಾರ | 9844884555 |
| 6 | ಶ್ರೀ.ಸತ್ಯನಾರಯಣ ಎಂ ಗ್ಯಾಂಗ್‌ಮೆನ್ | 9686404846 |
| 7 | ಶ್ರೀ.ಶರಣಪ್ಪ ಮಾರ್ಷಲ್ | 7483316635 |
| 8 | ಶ್ರೀ ಸೂರ್ಯ ಕಿರಿಯ ಆರೋಗ್ಯಾ ಪರಿವೀಕ್ಷಕರು:2 | 9901238214 |
| 9 | ಶ್ರೀ.ಚಿಟ್ಟಿ, ಮೇಲ್ವಿಚಾರಕರು | 9844485981 |
| 10 | ಶ್ರೀ.ಎಂ.ಕೃಷ್ಣಪ್ಪ ನಾಗರೀಕರು | 9740145923 |
| 11 | ಶ್ರೀ.ಬಿ.ಎನ್.ಆನಂದ ಕೆಲಸ ಪರಿವೀಕ್ಷರು BWSSB | 7899213659 |

* * * * * *

ದಿನಾಂಕ 21-01-2023 ರಂದು ಬೆಳಿಗ್ಗೆ 11.00 ಗಂಟೆಗೆ ನಡೆಸಲಾದ ವಾರ್ಡ್ ಮಟ್ಟದ ಸಾರ್ವಜನಿಕರ ಕುಂದು ಕೊರತೆಗಳನ್ನು ನಿವಾರಿಸುವ ನಿಟ್ಟಿನಲ್ಲಿ ಮತ್ತು ಅಭಿವೃದ್ಧಿ ಕಾಮಗಾರಿಗಳನ್ನು ನಿರ್ವಹಿಸುವ ಸಂಬಂಧ ವಾರ್ಡ್ ಸಮಿತಿ ಸಭೆಯನ್ನು ಆಯೋಜಿಸಲಾಗಿ ಮೊದಲಿಗೆ ಹಾಜರಿದ್ದ, ಅಧ್ಯಕ್ಷರಿಗೆ ಸ್ವಾಗತವನ್ನು ಕೋರುತ್ತಾ ಹಾಗೂ ಸಭೆಗೆ ಹಾಜರಾದ ಎಲ್ಲಾ ಇಲಾಖೆಯ ಅಧಿಕಾರಿ ವರ್ಗದವರಿಗೆ ಮತ್ತು ಸ್ಥಳೀಯ ನಾಗರಿಕರಿಗೆ ಸ್ವಾಗತವನ್ನು ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು.

ಸಭೆಯನ್ನು ಪ್ರಾರಂಭಿಸುತ್ತಾ, ಸದರಿ ವಾರ್ಡ್‌ನ ಎಲ್ಲಾ ಕುಂದುಕೊರತೆಗಳನ್ನು ಇಲಾಖೆವಾರು ಚರ್ಚಿಸಿ ಬಗೆಹರಿಸಿಕೊಳ್ಳಲು ಅಧ್ಯಕ್ಷರು ಸಲಹೆಯನ್ನು ನೀಡಿರುತ್ತಾರೆ. ಈ ಕುರಿತಂತೆ ಈ ಕೆಳಕಂಡ ವಿಷಯಗಳನ್ನು ಸಂಕ್ಷಿಪ್ತವಾಗಿ ಚರ್ಚಿಸಿ ಪರಿಹರಿಸುವ ಬಗ್ಗೆ ಕೈಗೊಳ್ಳುವ ಕ್ರಮಗಳ ಬಗ್ಗೆ ಅಧಿಕಾರಿಗಳಿಗೆ ನಿರ್ದೇಶನವನ್ನು ನೀಡಲಾಯಿತು.



Scanned with OKEN Scanner

ನಿವಾ... ಸೂಚಿಸು...

**ರಸ್ತೆ ಅಗೆತಗಳು ಮತ್ತು ರಸ್ತೆಗುಂಡಿಗಳ ನಿರ್ವಹಣೆ ಮಾಡುವ ಬಗ್ಗೆ:**

ಸಭೆಗೆ ಹಾಜರಿದ್ದ ಎಲ್ಲಾ ಸದಸ್ಯರು ಕ್ರಮವಾಗಿ ಮಾತನಾಡಿ ಬಿ.ಟಿ.ಎಂ ಬಡಾವಣೆಯ ಅನೇಕ ರಸ್ತೆಗಳಲ್ಲಿ ಈಗಾಗಲೇ ಡಾಂಬರೀಕರಣ ಹಾಗೂ ಚರಂಡಿ ಕಾಮಗಾರಿಯು ಪ್ರಗತಿಯಲ್ಲಿದ್ದು, ಬಿ.ಡಬ್ಲ್ಯೂ.ಎಸ್.ಎಸ್.ಬಿ ರವರು ಅಗೆದಿರುವ ರಸ್ತೆಗಳಲ್ಲಿ ವೈಜ್ಞಾನಿಕವಾಗಿ ಡಾಂಬರೀಕರಣ ಮಾಡಲಾಗಿದೆ ಎಂದು ಹರ್ಷವನ್ನು ವ್ಯಕ್ತಪಡಿಸಿದರು. ಇನ್ನೂಳಿದ ರಸ್ತೆಗಳಲ್ಲಿ ಡಾಂಬರೀಕರಣ ಮಾಡುವಂತೆ ಕೋರಿದರು.

**ಕ್ರಮ:** ಸಹಾಯಕ ಕಾರ್ಯಪಾಲಕ ಅಭಿಯಂತರರು ಬಿ.ಟಿ.ಎಂ ಲೇಔಟ್ ಉಪವಿಭಾಗ

**ಘನತ್ಯಾಜ್ಯ ನಿರ್ವಹಣೆ ಮಾಡುವ ಬಗ್ಗೆ:-**

ಸಭೆಗೆ ಹಾಜರಿದ್ದ ಎಲ್ಲಾ ಸದಸ್ಯರು ಕ್ರಮವಾಗಿ ಮಾತನಾಡಿ, ಈಗಾಗಲೇ ಎಲೆ ಉದುರುವ ಸಮಯವಾಗಿದ್ದು, ಬಿ.ಟಿ.ಎಂ ಬಡಾವಣೆಯ ಅನೇಕ ರಸ್ತೆಗಳಲ್ಲಿ ಹೆಚ್ಚಾಗಿ ಮರಗಳಿದ್ದು ಸರಿಯಾಗಿ ರಸ್ತೆಯನ್ನು ಸ್ವಚ್ಚಗೊಳಿಸುತ್ತಿಲ್ಲ ಎಂದು ಸಭೆಗೆ ತಿಳಿಸಿ, ಎಲ್ಲಾ ಮುಖ್ಯರಸ್ತೆಗಳಲ್ಲಿ ಹಾಗೂ ಅಡ್ಡರಸ್ತೆಗಳಲ್ಲಿ ಸ್ವಚ್ಚಗೊಳಿಸುವಂತೆ ಸಭೆಗೆ ಕೋರಿದರು.

**ಕ್ರಮ:** ಕಿರಿಯ ಆರೋಗ್ಯ ಪರಿವೀಕ್ಷಕರು ವಾರ್ಡ್ ಸಂಖ್ಯೆ 192 ಮತ್ತು ಸಹಾಯಕ ಕಾರ್ಯಪಾಲಕ ಅಭಿಯಂತರರು ಘ.ತ್ಯಾನಿ ಬಿ.ಟಿ.ಎಂ ವಲಯ

**ಅವಶ್ಯಕ ಕಾಮಗಾರಿಗಳು ನಿರ್ವಹಿಸುವ ಬಗ್ಗೆ.**

ಸಭಾಧ್ಯಕ್ಷರು ಮಾತನಾಡಿ ವಾರ್ಡ್ ವ್ಯಾಪ್ತಿಯ ಇನ್ನೂಳಿದ ರಸ್ತೆಗಳಲ್ಲಿ ಚರಂಡಿ ಕಾಮಗಾರಿ ಹಾಗೂ ಡಾಂಬರೀಕರಣವನ್ನು ಮಳೆಗಾಲಕ್ಕೆ ಮುಂಚೆಯೇ ಮಾಡುವಂತೆ ಸೂಚಿಸಿದರು.

ಈ ಬಗ್ಗೆ ಸಹಾಯಕ ಅಭಿಯಂತರರು ವಾರ್ಡ್ ಸಂಖ್ಯೆ 192 ರವರು ಮಾತನಾಡಿ ಈಗಾಗಲೇ ಅಮೃತ ನಗರೋತಾನ ಯೋಜನೆ ಅಡಿಯಲ್ಲಿ ವಾರ್ಡ್‌ಗೆ ಸಂಬಂಧಿಸಿದ ಸುಮಾರು 90% ರಷ್ಟು ರಸ್ತೆಗಳ ಚರಂಡಿ ಹಾಗೂ ಡಾಂಬರೀಕರಣ ಕಾಮಗಾರಿ ಮುಗಿದಿದ್ದು, ಇನ್ನೂಳಿದ ಕಾಮಗಾರಿಯನ್ನು ಮಾಡಲಾಗುವುದು ಎಂದು ಸಭೆಗೆ ತಿಳಿಸಿದರು.

**ಸೊಳ್ಳೆ ಔಷಧಿ ಸಿಂಪಡಣೆ ಮಾಡುವಬಗ್ಗೆ.**

ಸಭೆಗೆ ಹಾಜರಿದ್ದ ಸದಸ್ಯರು ಮಾತನಾಡಿ ವಾರ್ಡ್‌ವ್ಯಾಪ್ತಿಯಲ್ಲಿನ ಉದ್ಯಾನವನ ಹಾಗೂ ಆಟದ ಮೈದಾನದ ಆವರಣದಲ್ಲಿ ಸೊಳ್ಳೆಗಳು ಹೆಚ್ಚಾಗಿ ಅಲ್ಲಿ ವಾಯುವಿಹಾರಕ್ಕೆ ಬರುವ ಜನರಿಗೆ ಮತ್ತು ವೃದ್ಧರಿಗೆ ತುಂಬ ತೊಂದರೆಯಾಗುತ್ತಿದ್ದು, ಹಾಲಿ ಮಳೆಗಾಲವಿರುವುದರಿಂದ ಸೊಳ್ಳೆಗಳು ಹೆಚ್ಚಾಗಿ ಉತ್ಪತ್ತಿಯಾಗುತ್ತಿರುತ್ತದೆ. ಈ ಸಂಬಂಧ ಪ್ರತಿ ವಾರದ 1 ದಿನದಂತೆ ಸೊಳ್ಳೆಗಳ ನಿಯಂತ್ರಣಕ್ಕೆ ಫಾಂಗಿಂಗ್ ಮಾಡುವುದು ಮತ್ತು ಸೊಳ್ಳೆ ಔಷದಿ ಸಿಂಪಡಣೆ ಮಾಡಬೇಕೆಂದು ಸಭೆಗೆ ತಿಳಿಸಿದರು.

**ಕೋವಿಡ್ ನಿರ್ವಹಣೆ ಮಾಡುವಬಗ್ಗೆ.**

ಸಭಾಧ್ಯಕ್ಷರು ಮಾತನಾಡಿ, ಮಾರ್ಷಲ್ ರವರಿಗೆ ಮಹಾಮಾರಿ ಕೊರೋನ ರೋಗ ನಾಲ್ಕನೇ ಅಲೆಯ ರೋಗ ಹರಡದಂತೆ ತಡೆಯಲು ಮುಂಜಾಗ್ರತ ಕ್ರಮವಾಗಿ ವಾರ್ಡ್ ವ್ಯಾಪ್ತಿಯಲ್ಲಿ ಯಾವುದೇ ಸಭೆ, ಸಮಾರಂಭಗಳು ನಡೆದರೆ ತಪಾಸಣೆ ಮಾಡಿ, ಪರವಾನಿಗೆ ಇಲ್ಲದಿದ್ದರೆ ಪರಿಶೀಲಿಸಿ ಅಂತಹ ಸಮಾರಂಭಗಳನ್ನು ಸ್ಥಗಿತಗೊಳಿಸತಕ್ಕದ್ದು, ಮತ್ತು ಕಡ್ಡಾಯವಾಗಿ ಮಾಸ್ಕ್ ದರಿಸುವುದು ಸಾಮಾಜಿಕ ಅಂತರ ಕಾಯ್ದುಕೊಳ್ಳಲು ಮಾರ್ಗಸೂಚಿಗಳನ್ನು ಅಳವಡಿಸಿಕೊಳ್ಳಲು ಜಾಗೃತಿ ಮೂಡಿಸಬೆಕು ಹಾಗೂ ಮಾಸ್ಕ ದರಿಸದೇ ಇದ್ದವರಿಗೆ ದಂಡ ವಸೂಲಿ ಮಾಡಲು ಸಭೆಯಲ್ಲಿ ಹಾಜರಿದ್ದು ವಾರ್ಡ್ ಸದಸ್ಯರು ರವರಿಗೆ ಸೂಚಿಸಿದರು.

Scanned with OKEN Scanner

ಕೊನೆಯದಾಗಿ ಈ ಮೇಲ್ಕಂಡ ಎಲ್ಲಾ ವಿಷಯಗಳನ್ನು ಹಾಗೂ ಸಮಸ್ಯೆಗಳನ್ನು ಬರುವ ಮುಂದಿನ ಸಭೆಯೊಳಗಾಗಿ ನಿವಾರಣೆ ಮಾಡಿ ಅನುಪಾಲನೆ ವರದಿಯನ್ನು ಸಂಬಂಧಪಟ್ಟ ಅಧಿಕಾರಿಗಳು ಕಳುಹಿಸಿಕೊಡಬೇಕಾಗಿ ಈ ಮೂಲಕ ಸೂಚಿಸುತ್ತಾ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

22/01/2023

ಕಾರ್ಯದರ್ಶಿಗಳು,
ವಾರ್ಡ್ ಸಂಖ್ಯೆ:192, ಬಿ.ಟಿ.ಎಂ ಬಡಾವಣೆ
ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ.

ಪ್ರತಿಯನ್ನು:

1. ಮಾನ್ಯ ಆಯುಕ್ತರು ರವರ ಅವಗಾಹನೆಗೆ ಸಲ್ಲಿಸಲು ಆಪ್ತ ಕಾರ್ಯಾಲಯಕ್ಕೆ ಸಲ್ಲಿಸಿದೆ.
2. ಮಾನ್ಯ ವಿಶೇಷ ಆಯುಕ್ತರು (ಯೋಜನೆ) ರವರ ಅವಗಾಹನೆಗೆ ಸಲ್ಲಿಸಿದೆ.
3. ಮಾನ್ಯ ವಿಶೇಷ ಆಯುಕ್ತರು (ಘನತ್ಯಾಜ್ಯ) ರವರ ಅವಗಾಹನೆಗೆ ಸಲ್ಲಿಸಿದೆ.
4. ಜಂಟಿ ಆಯುಕ್ತರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
5. ಮುಖ್ಯ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
6. ಅಧೀಕ್ಷಕ ಅಭಿಯಂತರರು (ದಕ್ಷಿಣ) ರವರ ಅವಗಾಹನೆಗೆ ಸಲ್ಲಿಸಿದೆ.
7. ಕಾರ್ಯಪಾಲಕ ಅಭಿಯಂತರರು, ಬಿ.ಟಿ.ಎಂ.ಲೇಔಟ್ ವಿಭಾಗರವರಿಗೆ ಸೂಕ್ತ ಕ್ರಮಕ್ಕಾಗಿ ಸಲ್ಲಿಸಿದೆ.
8. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಸ್ಕಾಂ ರವರಿಗೆ ಮುಂದಿನ ಕ್ರಮಕ್ಕೆ
9. ಸಹಾಯಕ ಕಾರ್ಯಪಾಲಕ ಅಭಿಯಂತರರು, ಬೆಂಗಳೂರು ಜಲಮಂಡಳಿ, ಬಿ.ಟಿ.ಎಂ ರವರಿಗೆ ಮುಂದಿನ ಕ್ರಮಕ್ಕೆ

Scanned with OKEN Scanner